# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:01:ಗ್ರಾವಿಯೋ:2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 01.02.2017

## ಸುತ್ತೋಲೆ

**ವಿಷಯ :** ಗ್ರಾಮ ವಿಕಾಸ ಯೋಜನೆಯಡಿಯಲ್ಲಿ ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಇಲಾಖೆಗೆ ವಹಿಸಿರುವ ಕಾಮಗಾರಿಗಳಿಗೆ ಅನುದಾನವನ್ನು ನೇರವಾಗಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ರವರಿಗೆ ಬಿಡುಗಡೆಗೊಳಿಸುವ ಬಗ್ಗೆ.

**ಉಲ್ಲೇಖ :** ಮುಖ್ಯ ಇಂಜಿನಿಯರ್, ಪಂ ರಾಜ್ ಇಂಜಿನಿಯರಿಂಗ್ ಇಲಾಖೆ ಇವರ ಪತ್ರ ಸಂಖ್ಯೆ:ಮುಇಂ/ಪಂರಾಇಂಇ/ಕಾಇಂ-2ತಾಂಸ-4/ಸ, ಇಂ-5/2016-17, ದಿ: 13.01.2017

* * *

ಗ್ರಾಮ ವಿಕಾಸ ಯೋಜನೆಯಡಿ ಸಿವಿಲ್ ಕಾಮಗಾರಿಗಳನ್ನು ಅನುಷ್ಠಾನಕ್ಕೆ ತರಲು ಗ್ರಾಮ ಪಂಚಾಯತಿಯು ಪಂಚಾಯತ್ ರಾಜ್ ಇಂಜಿನಿಯರಿಂಗ್ ಸಂಸ್ಥೆ ಅಥವಾ ಕೆ.ಆರ್.ಐ.ಡಿ.ಎಲ್ ಸಂಸ್ಥೆಗೆ ಆಯ್ಕೆ ಮಾಡಿಕೊಳ್ಳಲು ಅವಕಾಶವನ್ನು ಕಲ್ಪಿಸಿದೆ.

ಗ್ರಾಮ ಪಂಚಾಯತಿಗಳು ಗ್ರಾಮ ವಿಕಾಸ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಕ್ಕೆ ತರಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ವಹಿಸಿದ ಸಂದರ್ಭದಲ್ಲಿ ಟೆಂಡರ್‌ಗಳನ್ನು ಕರೆದು ಗುತ್ತಿಗೆದಾರರೊಂದಿಗೆ ನಿಯಮಾನುಸಾರ ಟೆಂಡರ್ ಕರಾರುಗಳನ್ನು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು ಮಾಡಿಕೊಳ್ಳುವುದರಿಂದ ಮತ್ತು ಕಾಮಗಾರಿಗಳನ್ನು ನಿಗಧಿತ ಸಮಯದಲ್ಲಿ ಪೂರ್ಣಗೊಳಿಸುವ ಸಂಪೂರ್ಣ ಜವಾಬ್ದಾರಿ ಹೊಂದಿರುತ್ತವೆ.

ಸರ್ಕಾರವು ಗ್ರಾಮ ವಿಕಾಸ ಯೋಜನೆಯ ಅನುದಾನವನ್ನು ಜಿಲ್ಲಾ ಪಂಚಾಯತ್‌ಗಳ ಮೂಲಕ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಿದ ಕೂಡಲೇ ಗ್ರಾಮ ಪಂಚಾಯಿತಿಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಗ್ರಾಮ ವಿಕಾಸ ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಅನುದಾನವನ್ನು ಚೆಕ್ ಮೂಲಕ ಅಥವಾ ಆರ್.ಟಿ.ಜಿ.ಎಸ್. ಮೂಲಕ ಆಯಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲು ಕ್ರಮ ವಹಿಸಲು ಸಂಬಂಧಪಟ್ಟ ಪಂಚಾಯಿತಿಗೆ ಸೂಚಿಸುವುದು.

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ ಮತ್ತು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
ದೂರವಾಣಿ & ಫ್ಯಾಕ್ಸ್ : 080-22372992

ಪ್ರತಿಯನ್ನು ಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
3. ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ವಿಕಾಸ ಯೋಜನೆ ಅನುಷ್ಠಾನಗೊಳಿಸಿರುವ ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಈ ಸುತ್ತೋಲೆಯ ಪ್ರತಿಯನ್ನು ಕಡ್ಡಾಯವಾಗಿ ತಲುಪಿಸಲು ಕ್ರಮ ವಹಿಸುವುದು.

5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.
6. ಮುಖ್ಯಸ್ಥರು, ಗಣಕಕೋಶ, ಗ್ರಾ ಮತ್ತು ಪಂ.ರಾಜ್ ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು.

**ಪ್ರತಿಯನ್ನು ಮಾಹಿತಿಗಾಗಿ.**

1. ಮಹಾಲೇಖಪಾಲರು (ಆಡಿಟ್-I & II), ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗಳ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ ಮತ್ತು ಪಂ ರಾಜ್ ಇಲಾಖೆ.
5. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.